[redacted]



# ದಿ ಗೋಕಾಕ ಉಪ್ಪಾರರ ಔದ್ಯೋಗಿಕ ಸಹಕಾರಿ ಸಂಘದ ನೂತನ ಕಟ್ಟಡದ ಉದ್ಘಾಟನೆ



ಗೋಕಾಕ: ಕಾಯಕ ಸಮಾಜದ ಪ್ರತೀಕವಾಗಿರುವ ಉಪ್ಪಾರ ಸಮಾಜ ಇನ್ನಷ್ಟು ಸಂಘ-ಸಂಸ್ಥೆಗಳನ್ನು ಕಟ್ಟುವ ಮೂಲಕ ಆರ್ಥಿಕವಾಗಿ ಸಧೃಡರಾಗಬೇಕೆಂದು ಇಲ್ಲಿಯ ಶೂನ್ಯ ಸಂಪಾದನಾ ಮಠದ ಶ್ರೀ ಮುರುಘರಾಜೇಂದ್ರ ಮಹಾಸ್ವಾಮಿಗಳು ಹೇಳಿದರು.

ರವಿವಾರದಂದು ನಗರದ ಗುರುವಾರ ಪೇಠೆಯಲ್ಲಿ ದಿ ಗೋಕಾಕ ಉಪ್ಪಾರರ ಔದ್ಯೋಗಿಕ ಸಹಕಾರಿ ಸಂಘದ ನೂತನ ಕಟ್ಟಡದ ಉದ್ಘಾಟನಾ ಸಮಾರಂಭದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದ ಅವರು, ಆರ್ಥಿಕವಾಗಿ ಶೈಕ್ಷಣಿಕವಾಗಿ ಹಿಂದುಳಿದಿರುವ ಉಪ್ಪಾರ ಸಮಾಜವು ಒಗ್ಗಟ್ಟಾಗಿ ಎಲ್ಲ ರಂಗಗಳಲ್ಲೂ ಏಳ್ಗೆಯನ್ನು ಕಾಣಬೇಕು. ಎಲ್ಲ ಸಮುದಾಯಗಳೊಂದಿಗೆ ಹೊಂದಿಕೊಳ್ಳುವ ಸಮಾಜವು ಅಭಿವೃದ್ದಿ ಪಥದತ್ತ ಸಾಗಬೇಕೆಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಚಾರ್ಟರ್ಡ ಅಕೌಂಟಂಟ್ ಸೈದಪ್ಪ ಗದಾಡಿ ಮಾತನಾಡಿ ಸಂಘ-ಸಂಸ್ಥೆಗಳು ಬೆಳವಣಿಗೆಯಾಗಬೇಕಾದರೇ ಸದಸ್ಯರು ಹಾಗೂ ಆಡಳಿತ ಮಂಡಳಿಯವರು ಹೊಂದಾಣಿಕೆ ಮುಖ್ಯವಾಗಿದೆ. ಸಂಘವು ಆಧುನಕತೆಯನ್ನು ಅಳವಡಿಸಿಕೊಂಡು ತಮ್ಮ ಕಾರ್ಯವ್ಯಾಪ್ತಿಯನ್ನು ವಿಸ್ತರಿಸಿಕೊಳ್ಳಬೇಕು ಎಂದು ಹೇಳಿದರು.

ನೂತನ ಕಟ್ಟಡದ ಉದ್ಘಾಟನೆಯನ್ನು ಲೋಕೋಪಯೋಗಿ ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ನೆರವೇರಿಸಿದರು. ಕಾರ್ಯಕ್ರಮದ ಸಾನಿಧ್ಯವನ್ನು ಕಟಕಭಾಂವಿಯ ಶ್ರೀ ಧರಿದೇವರ ಪುಣ್ಯಾಶ್ರಮದ ಅಭಿನವ ಧರೇಶ್ವರ ಮಹಾಸ್ವಾಮಿಗಳು ವಹಿಸಿದ್ದರು. ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷ ಮಾಯಪ್ಪ ತಹಶೀಲದಾರ ವಹಿಸಿದ್ದರು. ಘಟಪ್ರಭಾ ಸಹಕಾರಿ ಸಕ್ಕರೆ ಕಾರ್ಖಾನೆಯ ಅಧ್ಯಕ್ಷ ಅಶೋಕ ಪಾಟೀಲ, ಸಂಸ್ಥೆಯ ಉಪಾಧ್ಯಕ್ಷ ಪರಶುರಾಮ ಶಿಂಗಳಾಪೂರ, ನಿರ್ದೇಶಕರಾದ ಮಾರುತಿ ಜಡಿನವರ, ನಂಗಪ್ಪ ಹುಳ್ಳಿ, ಬಸಪ್ಪ ರಂಕನಕೊಪ್ಪ, ಯಲ್ಲಪ್ಪ ಹೆಜ್ಜೆಗಾರ, ಮಲ್ಲಪ್ಪ ಮದಿಹಳ್ಳಿ, ಭೀಮಶಿ ಖಾನಪ್ಪನವರ, ಗಣಪತಿ ತಹಶೀಲದಾರ, ಸಿದ್ಧಾರ್ಥ ಪಾತ್ರೋಟ, ಲಕ್ಷ್ಮೀ ಖಾನಪ್ಪನವರ, ಲಕ್ಷ್ಮವ್ವ ಕಿತ್ತೂರ ಸೇರಿದಂತೆ ಅನೇಕರು ಇದ್ದರು.

ಪ್ರಾಸ್ತಾವಿಕವಾಗಿ ಅಡಿವೆಪ್ಪ ಕಿತ್ತೂರ ಮಾತನಾಡಿದರು, ಬಸವರಾಜ ಖಾನಪ್ಪನವರ ಸ್ವಾಗತಿಸಿದರು, ಶಿವಲಿಂಗ ಇಡಗಲ್ಲ ನಿರೂಪಿಸಿದರು.

ಪೋಟೋ 21 ಜಿಕೆಕೆ-1

ಗೋಕಾಕ: ನಗರದ ಗುರುವಾರ ಪೇಠೆಯಲ್ಲಿ ದಿ ಗೋಕಾಕ ಉಪ್ಪಾರರ ಔದ್ಯೋಗಿಕ ಸಹಕಾರಿ ಸಂಘದ ನೂತನ ಕಟ್ಟಡವನ್ನು ಲೋಕೋಪಯೋಗಿ ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರು ಉದ್ಘಾಟಿಸಿದರು.

# ಅಡವಿಸೋಮಾಪುರದಲ್ಲಿ ಮತದಾನ ಜಾಗೃತಿ ಪ್ರತಿಯೊಂದು ಮತವು ಅತ್ಯಮೂಲ್ಯ



ಗದಗ: ತಾಲೂಕಿನ ಅಡವಿಸೋಮಾಪುರ ಗ್ರಾಮದಲ್ಲಿ ಕಳೆದ ಚುನಾವಣೆಗಳಲ್ಲಿ ಕಡಿಮೆ ಮತದಾನ ಪ್ರಮಾಣದ ಕೇಂದ್ರಗಳಿಗೆ ತಾಲೂಕು ಸ್ವೀಪ್ ಸಮಿತಿ ವತಿಯಿಂದ ವಿಶೇಷ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ಸದರ ಕಾರ್ಯಕ್ರಮದಲ್ಲಿ ಕಳೆದ ಚುನಾವಣೆಗಿಂತ ಈ ಸಲ ಹೆಚ್ಚಿನ ಮತದಾನ ಆಗಬೇಕು. ಆದ್ದರಿಂದ ಗ್ರಾಮದ ಜನರಲ್ಲಿ ಜಾಗೃತಿ ಮೂಡಿಸುವುದು ತುಂಬಾ ಅವಶ್ಯಕ ಎಂದು ತಾಲೂಕು ಸ್ವೀಪ್ ಅಧ್ಯಕ್ಷರು ಹಾಗೂ ಕಾರ್ಯನಿರ್ವಾಹಕ ಅಧಿಕಾರಿ ಮಾಣಿಕರಾವ್ ಪಾಟೀಲ ಹೇಳಿದರು.

ಗದಗ ತಾಲೂಕಿನ ಅಡವಿಸೋಮಾಪುರ ಗ್ರಾಮದಲ್ಲಿ ಇಂದು ಬೆಳಿಗ್ಗೆ ವಾಕ್ ಥಾನ್ ಹಾಗೂ ಮನೆ-ಮನೆ ಭೇಟಿ, ನ್ಯಾಯ ಬೆಲೆ ಅಂಗಡಿಗಳಿಗೆ ಭೇಟಿ ಕಾರ್ಯಕ್ರಮದ ನಿಮಿತ್ತ ಮಾತನಾಡಿದ ಅವರು, ಮೇ.7 ರಂದು ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಬೇಕು. ಜೊತೆಗೆ ನಮ್ಮ ಮನೆಯ ಪಕ್ಕದವರಿಗೆ ಮತ್ತು ವಲಸೆ ಹೋದವರಿಗೂ ಜಾಗೃತಿ ಮೂಡಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದರು. ಇದೆ ಸಂದರ್ಭದಲ್ಲಿ ಹಾಜರಿದ್ದರು ಸರ್ವ ಸಿಬ್ಬಂದಿಗಳು *ಮಾನವ ಸರಪಳಿ* ನಿರ್ಮಿಸಿ ಗ್ರಾಮದಲ್ಲಿ ಜನರಲ್ಲಿ ಮತದಾನ ಜಾಗೃತಿ ಮೂಡಿಸಿದರು.

ಸಾಮಾಜಿಕ ಜಾಲತಾಣಗಳಲ್ಲಿ ಮತದಾನದ ಬಗ್ಗೆ ಹೆಚ್ಚೆಚ್ಚು ಪ್ರಚಾರ ಮಾಡಬೇಕು. ಗ್ರಾಮದಲ್ಲಿ ವಲಸೆ ಹೋದ ಮತದಾರರಿಗೆ ಮುಂಚಿತವಾಗಿ ತಿಳಿಸಿ ಅವರನ್ನು ಮತದಾನ ದಿನದಂದು ಗ್ರಾಮಕ್ಕೆ ಬಂದು ಮತ ಚಲಾಯಿಸಲು ತಿಳಿಸಬೇಕು ಎಂದು ಹೇಳಿದರು.

ಸಹಾಯಕ ನಿರ್ದೇಶಕ ಕುಮಾರ ಪೂಜಾರ ಮಾತನಾಡಿ, ಭಾರತ ದೇಶದಲ್ಲಿ ಪ್ರಜಾ ಪ್ರಭುತ್ವ ವ್ಯವಸ್ಥೆ ಇದೆ. ಮತದಾರರು ಯಾವುದೇ ಆಮೀಷಗಳಿಗೆ ಒಳಗಾಗದೆ ಧೈರ್ಯದಿಂದ ನಮ್ಮ ಮತದಾನದ ಹಕ್ಕು ಚಲಾಯಿಸಬೇಕು. ಹೆಚ್ಚೆಚ್ಚು ಮತದಾನ ಆಗುವಂತೆ ಪ್ರತಿಯೊಬ್ಬರಲ್ಲೂ ಜಾಗೃತಿ ಮೂಡಿಸಬೇಕು ಎಂದರು.

ಈ ವೇಳೆ ಪಂಚಾಯತ ಅಭಿವೃದ್ದಿ ಅಧಿಕಾರಿ, ಪಂಚಾಯತ ಸಿಬ್ಬಂದಿಗಳು, ತಾಲೂಕು ಮಟ್ಟದ ಅಧಿಕಾರಿಗಳು ಮತ್ತು ಆಶಾ ಕಾರ್ಯಕರ್ತರುಗಳು ಹಾಗು ವಿವಿಧ ಇಲಾಖೆ ಸಿಬ್ಬಂದಿ ಹಾಜರಿದ್ದರು

# ಮತದಾನ ಜಾಗೃತಿ: ಬೈಕ್ ಜಾಥಾ




ಯರಗಟ್ಟಿ: ಮತದಾನದ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಶನಿವಾರ ತಾಲೂಕು ಪಂಚಾಯಿತಿ ಸ್ವೀಪ್ ಸಮಿತಿಯಿಂದ ಸೋಮವಾರ ಬೈಕ್ ಜಾಥಾ ಹಮ್ಮಿಕೊಳ್ಳಲಾಗಿತ್ತು.

ಸುಮಾರು 100 ಬೈಕ್ ಸವಾರರು ಜಾಥಾದಲ್ಲಿ ಭಾಗವಹಿಸಿದ್ದರು. ಪಟ್ಟಣದ ಪ್ರವಾಸಿ ಮಂದಿರದಿಂದ ಆರಂಭವಾದ ಜಾಥಾ ತಹಶೀಲ್ದಾರ ಕಚೇರಿಯ ವರೆಗೆ ಸಾಗಿ ಬಂತು.

ತಾಲೂಕು ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಯಶವಂತಕುಮಾರ ಹಸಿರು ನಿಶಾನೆ ತೋರುವ ಮೂಲಕ ಜಾಥಾಕ್ಕೆ ಚಾಲನೆ ನೀಡಿ ಮಾತನಾಡಿ, 'ಪ್ರತಿಯೊಬ್ಬರು ತಪ್ಪದೇ ಮತದಾನ ಮಾಡಬೇಕು. ಈ ಬಾರಿ ತಾಲೂಕಿನಲ್ಲಿ 6372 ಸಾವಿರ ಯುವ ಮತದಾರರು ತಮ್ಮ ಮತ ಚಲಾಯಿಸುತ್ತಿದ್ದಾರೆ. ಮತದಾನ ಮಾಡುವುದು ಪ್ರತಿಯೊಬ್ಬರ ಕರ್ತವ್ಯ' ಎಂದು ತಿಳಿಸಿದರು. ಪ್ರತಿಯೊಂದು ಗ್ರಾ.ಪಂ, ತಾ.ಪಂ, ಪುರಸಭೆ, ಪಟ್ಟಣ ಪಂಚಾಯತ ಕೇಂದ್ರಗಳಲ್ಲಿ ಮತದಾನ ಜಾಗೃತಿ ಜಾಥಾ ಏರ್ಪಡಿಸಲಾಗಿದೆ. ತಾಲೂಕಿನಲ್ಲಿ ಮತದಾನ ಪ್ರಮಾಣ ಹೆಚ್ಚಳಕ್ಕೆ ಬೇಕಾದ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದರು.

ತಹಶೀಲ್ದಾರರು ಎಸ್. ಎಸ್. ಇಂಗಳೆ, ಪಟ್ಟಣ ಪಂಚಾಯತಿ ಮುಖ್ಯಾಧಿಕಾರಿಗಳು ಡಿ. ಎನ್. ತಹಶೀಲ್ದಾರ, ತಾಪಂ ಸಹಾಯಕ ನಿರ್ದೇಶಕರು (ಪಂ.ರಾ) ಆರ್. ಎ. ಪಾಟೀಲ ತಾಪಂ ವ್ಯವಸ್ಥಾಪಕರು ಜಿ. ಎಸ್. ಬಡೆಮ್ಮಿ, ಐಇಸಿ ಸಂಯೋಜಕ ಮಲೀಕಜಾನ ಮೋಮಿನ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿಗಳು, ತಾಪಂ ಸಿಬ್ಬಂದಿಗಳು, ಗ್ರಾಪಂ ಸಿಬ್ಬಂದಿಗಳು, ಪಟ್ಟಣ ಪಂಚಾಯತಿ ಸಿಬ್ಬಂದಿಗಳು ಇದ್ದರು.

# ಮೂಡಲಗಿಯಲ್ಲಿ ಹೆಬ್ಬಾಳಕರ್ ಪರ ಪ್ರಚಾರ



ಮೂಡಲಗಿ : ಕಾಂಗ್ರೇಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ ಪರ ಮತಯಾಚನೆ ಸಲುವಾಗಿ ಏ.23ರಂದು ಅರಭಾವಿ ಮತಕ್ಷೇತ್ರ ವ್ಯಾಪ್ತಿಯ ವಿವಿಧೆಡೆ ಸಮಾವೇಶ ನಡೆಯಲಿದೆ.

ಕಾಂಗ್ರೇಸ್ ಮುಖಂಡ ಅನೀಲಕುಮಾರ ದಳವಾಯಿ ಪತ್ರಿಕಾಗೋಷ್ಠಿಯಲ್ಲಿ ಈ ಕುರಿತು ಮಾಹಿತಿ ನೀಡಿದರು. ದುರದುಂಡಿ, ರಾಜಾಪೂರ, ಶಿವಾಪೂರ, ಮುನ್ಯಾಳ, ಧರ್ಮಟ್ಟಿ, ಸುಣಧೋಳಿ ಗ್ರಾಮಗಳಲ್ಲಿ ಕಾಂಗ್ರೇಸ್ ಕಾರ್ಯಕರ್ತರ ಸಮಾವೇಶ ಜರುಗುವುದು. ನಂತರ ಸಂಜೆ ಮೂಡಲಗಿ ಪಟ್ಟಣದಲ್ಲಿ ಬೃಹತ್ ರ್‍ಯಾಲಿ ಮೂಲಕ ಬಸವರಂಗ ಮಂಟಪದವರೆಗೂ ತಲುಪಿ, ಮಂಟಪದ ವೇದಿಕೆಯಲ್ಲಿ ಬೃಹತ್ ಸಮಾವೇಶ ಜರುಗುವುದು ಎಂದು ಅವರು ಹೇಳಿದರು.

ಈಗಾಗಲೇ ಅರಭಾವಿ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಪ್ರಚಾರ ಕಾರ್ಯ ಪ್ರಾರಂಭಿಸಲಾಗಿದ್ದು, 2ನೇ ಹಂತದ ಪ್ರಚಾರ ಕಾರ್ಯದಲ್ಲಿ ಸಚಿವ ಸತೀಶ ಜಾರಕಿಹೊಳಿ, ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ, ಶಾಸಕ ಲಕ್ಷ್ಮಣ ಸವದಿ ಅವರು ಭಾಗವಹಿಸಲಿದ್ದಾರೆ. ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ ಪರ ಮತಯಾಚನೆ ಮಾಡಲಿದ್ದು ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಕೋರಿದರು. ಕಾಂಗ್ರೇಸ್ ಮುಖಂಡರಾದ ಎಸ್.ಎಸ್. ಸೋನವಾಲ್ಕರ, ವಿ.ಪಿ. ನಾಯಕ್, ಬಿ.ಬಿ. ಹಂದಿಗುಂದ, ರಮೇಶ ಉಟಗಿ ಮಾತನಾಡಿ, ಈಗಾಗಲೇ ರಾಜ್ಯ ಸರ್ಕಾರ ಕರ್ನಾಟಕದ ಜನತೆಗೆ ಕೊಟ್ಟತಂಹ ಮಾತಿನಂತೆ 5 ಗ್ಯಾರಂಟಿಗಳನ್ನು ಈಡೇರಿಸಿ ಕೊಟ್ಟತಂಹ ಮಾತು ಉಳಿಸಿಕೊಂಡಿದ್ದು, ಕೇಂದ್ರದಲ್ಲಿಯೂ ಸಹ 25 ಗ್ಯಾರಂಟಿಗಳನ್ನು ಘೋಷಣೆ ಮಾಡಿದ್ದು ಆದರಿಂದ ಈ ಬಾರಿ ಕೇಂದ್ರದಲ್ಲಿ ಕಾಂಗ್ರೇಸ್ ಸರ್ಕಾರ ಆಗುವುದು ಖಚಿತ ಎಂದರು.

ಈ ಸಂದರ್ಭದಲ್ಲಿ ಕಾಂಗ್ರೇಸ ಮುಖಂಡರಾದ ಬಿ ಕೆ ಶಿವಕುಮಾರ, ಸುಭಾಷ ಪೂಜೇರಿ, ಕೆ ಟಿ ಗಾಣಿಗೇರ, ಸಲೀಂ ಇಮ್ಮಾದಾರ, ರವಿ ಮೂಡಲಗಿ, ಸುರೇಶ ಮಗದುಮ್ಮ, ಸಂಗಮೇಶ ಕೌಜಲಗಿ, ಹಾಗೂ ಕಾಂಗ್ರೇಸ ಕಾರ್ಯಕರ್ತರು ಉಪಸ್ಥಿತರಿದ್ದರು.



ಯರಗಟ್ಟಿ : ಸಮೀಪದ ಸತ್ತಿಗೇರಿ ಗ್ರಾಮದಲ್ಲಿ ಒಂಬತ್ತು ದಿನಗಳ ಕಾಲ ನಡೆದ ಗ್ರಾಮ ದೇವತೆ ದ್ಯಾಮವ್ವ ದೇವಿಯ ಜಾತ್ರಾ ಮಹೋತ್ಸವನ್ನು ರವಿವಾರ ಗ್ರಾಮ ದೇವಿಗೆ ವಿಶೇಳ ಪೂಜೆ ಸಲ್ಲಿಸುವ ಮೂಲಕ ಜಾತ್ರಾ ಮಹೋತ್ಸವಕ್ಕೆ ತೆರೆ ಎಳೆದರು.ರವಿವಾರ ಸ್ಥಳೀಯ ಬಜಾರ ಕಟ್ಟೆಯಲ್ಲಿಪ್ರತಿಷ್ಠಾಪನೆಗೊಂಡಿದ್ದ ದ್ಯಾಮವ್ವಳನ್ನು ಬೆಳಗ್ಗೆ 10ಕ್ಕೆ ಶ್ರೀ ಗ್ರಾಮದೇವಿಯ ಹೊನ್ನಾಟದ ಮೂಲಕ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಪಾದಗಟ್ಟಿ ತಲುಪಿದಳು.ನಂತರ ಮಹಿಳೆಯರು ಮಕ್ಕಳು ವಿಶೇಳ ಪೂಜೆ ಸಲ್ಲಿಸಿ, ದೇವಿಗೆ ಉಡಿ ತುಂಬುವ ಮೂಲಕ ಭಕ್ತಿಭಾವ ಮೆರೆದರು.ದೇವಸ್ಥಾನ ಸಮಿತಿಯಿಂದ ಶ್ರೀ ದೇವಿಗೆ ವಿಶೇಳ ಪೂಜೆ ಸಲ್ಲಿಸಿದರು. ಸಂಜೆ ಸಕಲ ವಾದ್ಯ ವೃಂದದ ಸೀಮೋಲಂಗನೆ ಮೂಲಕ ಜಾತ್ರಾ ಮಹೋತ್ಸವವನ್ನು ಸಪ್ಪನ್ನಗೊಳಿಸಿದರು. 5 ವರ್ಷಗಳ ನಂತರ ಗ್ರಾಮದಲ್ಲಿ ದೇವತೆ ಶ್ರೀ ದ್ಯಾಮವ್ವ ದುರ್ಗವ್ವಳ ಜಾತ್ರೆ ಸತತ 9 ದಿನಗಳ ಕಾಲ ಅದ್ದೂರಿಯಾಗಿ ನಡೆದು ರವಿವಾರ ಮುಕ್ತಾಯಗೊಂಡಿತು. 2029ಕ್ಕೆ ಗ್ರಾಮದೇವತೆ ದ್ಯಾಮವ್ವ ದುರ್ಗವ್ವಳಜಾತ್ರೆ ಜಾತ್ರೆ ನಡೆಯಲಿದೆ ಎಂದು ದೇವಸ್ಥಾನ ಸಮಿತಿ ತಿಳಿಸಿದೆ.

# ನಾಲ್ಕು ಗ್ರಂಥಗಳ ಲೋಕಾರ್ಪಣೆ ಸಮಾರಂಭ



ಗೋಕಾಕ: ಉತ್ತರ ಕರ್ನಾಟಕ ಸಾಹಿತ್ಯಿಕವಾಗಿ ಹಾಗೂ ಸಾಂಸ್ಕೃತಿಕವಾಗಿ ಫಲವತ್ತಾದ ನೆಲವಾಗಿದೆ ಎಂದು ಬೆಂಗಳೂರಿನ ಲಲಿತ ಪ್ರಬಂಧಕಾರ ಈರಪ್ಪ ಕಂಬಳಿ ಹೇಳಿದರು.

ರವಿವಾರದಂದು ನಗರದ ಅಮ್ಮಾಜೀ ನೃತ್ಯ ಶಾಲೆಯಲ್ಲಿ ಇಲ್ಲಿನ ಹಿರಿಯ ಸಾಹಿತಿ ಮಹಾಲಿಂಗ ಮಂಗಿ ಅವರ ದಿಲ್ಲಿ ಲೋಕಾಭಿರಾಮ, ಪರಿಣಯ ಪರಸಂಗ, ಅವುಜೀಕರ ಮಹಾರಾಜ, ಯದ್ಭಾವಂ ತದ್ಭವತಿ ಎಂಬ ನಾಲ್ಕು ಗ್ರಂಥಗಳ ಲೋಕಾರ್ಪಣೆ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಮ್ಮ ಸಾಹಿತಿಗಳು ನೀಡಿದ ಮೌಲ್ಯಾಧಾರಿತ ಗ್ರಂಥಗಳನ್ನು ಇಂದಿನ ಯುವಪೀಳಿಗೆ ಓದುವ ಮೂಲಕ ಸುಸಂಸ್ಕತರಾಗಿ ಸಂಸ್ಕೃತಿಯನ್ನು ಉಳಿಸಿ, ಬೆಳಸಬೇಕು. ಗೋಕಾಕ ತಾಲೂಕು ಹಲವಾರು ಮಹಾನ ಸಾಹಿತಿಗಳನ್ನು ನಾಡಿಗೆ ನೀಡಿದೆ.150 ಗ್ರಂಥಗಳನ್ನು ರಚಿಸುವ ಮೂಲಕ ಅಂತಹ ಸಾಲಿಗೆ ಮಹಾಲಿಂಗ ಮಂಗಿ ಅವರು ಸೇರಿದ್ದಾರೆ. ಇನ್ನು ಹೆಚ್ಚಿನ ಸಾಹಿತ್ಯ ಸೇವೆ ಅವರಿಂದ ದೊರೆಯಲೆಂದು ಹಾರೈಸಿದರು.

ಕಾರ್ಯಕ್ರಮದ ಸಾನಿಧ್ಯವನ್ನು ಹುಕ್ಕೇರಿ ಶ್ರೀ ಮಂಜುನಾಥ್ ಮಹಾರಾಜರು ವಹಿಸಿದ್ದರು. ಗ್ರಂಥಗಳನ್ನು ಮಕ್ಕಳ ಸಾಹಿತಿ ಡಾ.ಎಲ್.ಎಸ್.ಚೌರಿ ಲೋಕಾರ್ಪಣೆ ಮಾಡಿದರು.

ಗ್ರಂಥಗಳ ಕುರಿತು ಡಾ.ಅನಿತಾ ಕರಾಜನಗಿ, ಡಾ.ಸಾವಿತ್ರಿ ಕಮಲಾಪೂರ, ಪ್ರಾಚಾರ್ಯ ಜಯಾನಂದ ಮಾದರ, ಈಶ್ವರ ಮಮದಾಪುರ ಮಾತನಾಡಿದರು. ವೇದಿಕೆಯಲ್ಲಿ ಡಾ.ಉದ್ದಣ್ಣ ಗುಡೇರ, ವಿದ್ಯಾ ರೆಡ್ಡಿ, ರಜನಿ ಜಿರಗ್ಯಾಳ, ಸೌಭಾಗ್ಯ ಕೊಪ್ಪ, ಚಂದ್ರಶೇಖರ್ ಅಕ್ಕಿ, ಮಹಾಂತೇಶ ತಾವಂಶಿ, ರಾಜೇಶ್ವರಿ ಒಡೆಯರ್, ಈಶ್ವರಚಂದ್ರ ಬೇಟಗೇರಿ, ಬಸವರಾಜ ಮುರಗೋಡ, ಡಾ.ಅಶೋಕ ಜಿರಗ್ಯಾಳ, ರಾಮಜಿ ಜಂಗನ್ನವರ ಉಪಸ್ಥಿತರಿದ್ದರು.

# ನೇಹಾ ಹಿರೇಮಠ ಹತ್ಯೆ ಖಂಡಿಸಿ ಪ್ರತಿಭಟನೆ



ಗೋಕಾಕ: ಹುಬ್ಬಳ್ಳಿಯ ವಿದ್ಯಾರ್ಥಿನಿ ನೇಹಾ ಹಿರೇಮಠ ಹತ್ಯೆಯನ್ನು ಖಂಡಿಸಿ ಇಲ್ಲಿನ ನಾಗರಿಕ ಹಿತರಕ್ಷಣಾ ವೇದಿಕೆ ಹಾಗೂ ಹಿಂದೂಪರ ಸಂಘಟನೆಗಳ ಒಕ್ಕೂಟಗಳ ಸಂಯುಕ್ತಾಶ್ರಯದಲ್ಲಿ ಸೋಮವಾರದಂದು ಬಸವೇಶ್ವರ ವೃತ್ತದಿಂದ ಬೃಹತ್ ಪ್ರತಿಭಟನಾ ಮೆರವಣಿಗೆ ಹಮ್ಮಿಕೊಂಡು ಮಿನಿ ವಿಧಾನಸೌಧದಲ್ಲಿ ತಹಶೀಲ್ದಾರ ಮುಖಾಂತರ ರಾಜ್ಯಪಾಲರಿಗೆ ಮನವಿ ಸಲ್ಲಿಸಿದರು.

ಇದೆ ಎಪ್ರೀಲ್ 18ರಂದು ಹುಬ್ಬಳ್ಳಿಯ ಕಾಲೇಜಿನ ಆವರಣದಲ್ಲಿಯೇ ವಿದ್ಯಾರ್ಥಿನಿ ನೇಹಾ ಹಿರೇಮಠ ಎನ್ನುವ ಹಿಂದೂ ಯುವತಿಯನ್ನು ಮುನ್ನವಳ್ಳಿಯ ಫಯಾಜ್ ಎನ್ನುವ ಮುಸ್ಲಿಂ ಯುವಕ ಚಾಕುವಿನಿಂದ ಇರಿದು ಅಮಾನುಷವಾಗಿ ಕೊಲೆ ಮಾಡಿದ್ದಾನೆ. ಹಿಂದೂ ಸಮಾಜ, ಹಿಂದೂಗಳ ಮೇಲೆ ಪದೇ ಪದೇ ಇಂತಹ ಘಟನೆಗಳು ನಡೆಯುತ್ತಿದ್ದು, ರಾಜ್ಯದಲ್ಲಿ ಮತಾಂದರಿಂದ ಪಾಕಿಸ್ತಾನ ಪರ ಘೋಷಣೆ ಕೂಗುವದು ಹೆಚ್ಚುತ್ತಿದೆ. ಮೈಸೂರಿನಲ್ಲಿ ಹಿಂದೂ ಮುಸ್ಲಿಂ ಯುವಕರು ಆಕ್ರಮಣ ಮಾಡಿ ಅವನಿಂದ ಪಾಕಿಸ್ತಾನ ಪರವಾಗಿ ಘೋಷಣೆ ಕೂಗುವಂತೆ ಒತ್ತಾಯಿಸುತ್ತಿರುವದು ಅತ್ಯಂತ ಖಂಡನೀಯ. ರಾಜ್ಯದ ವಿಧಾನ ಸಭೆಯಲ್ಲಿ ಪಾಕಿಸ್ತಾನ ಪರ ಘೋಷಣೆಯನ್ನು ಕೂಗಿದ್ದು ರಾಜ್ಯದ ಜನತೆ ತಲೆ ತಗ್ಗಿಸುವಂತೆ ಮಾಡಿದೆ. ರಾಜ್ಯ ಸರಕಾರದ ಮುಸ್ಲಿಂ ತುಷ್ಟೀಕರಣದ ನೀತಿಯಿಂದಾಗಿ ಇಂತಹ ಘಟನೆಗಳು ನಡೆಯುತ್ತಿರುವದು ಸ್ಪಷ್ಟವಾಗಿದೆ.

ಈ ಎಲ್ಲ ಘಟನೆಗಳಿಂದ ರಾಜ್ಯದ ಜನತೆ ಬೆಚ್ಚಿ ಬೀಳಿಸುವಂತಾಗಿದ್ದು, ಯುವತಿ ನೇಹಾ ಕೊಲೆಗಾರನ ವಿರುದ್ಧ ಅತ್ಯಂತ ಕಠಿಣ ಕ್ರಮ ಜರುಗಿಸಿ ರಾಜ್ಯದಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ನೋಡಿಕೊಳ್ಳುವುದು ಸರಕಾರದ ಕರ್ತವ್ಯ ಈ ಕುರಿತು ಸರಕಾರಕ್ಕೆ ಸೂಕ್ತ ನಿರ್ದೇಶನ ನೀಡುವ ಮೂಲಕ ಕ್ರಮ ಕೈಗೊಳ್ಳುವಂತೆ ರಾಜ್ಯಪಾಲರಿಗೆ ಮನವಿಯಲ್ಲಿ ಆಗ್ರಹಿಸಲಾಗಿದೆ. ಈ ಸಂದರ್ಭದಲ್ಲಿ ಮುಖಂಡರುಗಳಾದ ಡಾ.ಸಂಜಯ ಹೊಸಮಠ, ನಾರಾಯಣ ಮಠಾಧಿಕಾರಿ, ಆನಂದ ಪಾಟೀಲ, ಸದಾಶಿವ ಗುದಗಗೋಳ, ಡಾ.ಮಹಾಂತೇಶ ಕಡಾಡಿ, ಅನುಪಾ ಕೌಶಿಕ, ರಜನಿ ಜಿರಗ್ಯಾಳ, ಎಂ.ಡಿ.ಚುನಮರಿ, ಚಂದ್ರಶೇಖರ್ ಕೊಣ್ಣೂರ, ಪ್ರಮೋದ್ ಜೋಶಿ, ಎಸ್.ವ್ಹಿ ದೇಮಶೆಟ್ಟಿ, ಬಸವರಾಜ ಫಡತಾರೆ, ಪ್ರಕಾಶ ರಾಠೋಡ, ನರೇಂದ್ರ ಪರಮಾರ, ರಮೇಶ ಉಟಗಿ, ಮಹಾಂತೇಶ ತಾವಂಶಿ, ಸೋಮಶೇಖರ್ ಮಗದುಮ್ಮ, ಸಿ.ಜಿ.ಕೌಜಲಗಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಗುಡುಗು-ಸಿಡಿಲು ಹಾನಿಯಿಂದ ಸಂರಕ್ಷಣೆಗೆ ಅನುಸರಿಸಬೇಕಾದ ಅಗತ್ಯ ಕ್ರಮಗಳು

ಗದಗ ಏಪ್ರಿಲ್ : ಜಿಲ್ಲೆಯಲ್ಲಿ ಗುಡುಗು-ಸಿಡಿಲಿನಿಂದ ಸಂಭವಿಸಬಹುದಾದ ಹಾನಿಯಿಂದ ಸಂರಕ್ಷಣೆಗೆ ಅಗತ್ಯ ಕ್ರಮ ಅನುಸರಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಎಸ್.ಎಸ್.ನೀಲಗುಂದ ಅವರು ತಿಳಿಸಿದ್ದಾರೆ.

ಸಾಮಾನ್ಯವಾಗಿ ಮೇ ತಿಂಗಳಿನಲ್ಲಿ ಕಂಡುಬರುವ ಮಳೆಗಾಲದ ಆರಂಭದ ಹಂತದಲ್ಲಿ ತೀವ್ರತರದ ಗುಡುಗು-ಸಿಡಿಲು ಕಂಡುಬರುವುದು ಸಾಮಾನ್ಯವಾಗಿದ್ದು, ಜೊತೆಗೆ ಬಿರುಸಾಗಿ ಗಾಳಿಸಹಿತ ಮಳೆ ಕಂಡುಬರುವುದು ವಾಡಿಕೆಯಾಗಿದೆ. ಈ ಹಿನ್ನಲೆಯಲ್ಲಿ ಬಯಲು ಪ್ರದೇಶಗಳಲ್ಲಿ, ಗಿಡಗಳ ಕೆಳಗಡೆ ಅಥವಾ ಕಬ್ಬಿಣದಿಂದ ಕೂಡಿರುವ ಕಟ್ಟಡ ಅಥವಾ ಶೆಡ್‌ಗಳಲ್ಲಿ ಆಶ್ರಯ ಪಡೆಯದೇ ಸೂಕ್ತ ಸ್ಥಳದಲ್ಲಿ ಇದ್ದು, ಜೀವ ಹಾನಿ ತಪ್ಪಿಸಬೇಕು ಎಂದು ಸಾರ್ವಜನಿಕರಿಗೆ ತಿಳಿಸಿದ್ದಾರೆ.

ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರವು ಕಾಲಕಾಲಕ್ಕೆ ನೀಡುವ ಮಾರ್ಗಸೂಚನೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಆರೋಗ್ಯದ ದೃಷ್ಟಿಯಿಂದ ನೀಡುವ ಸಲಹೆಗಳನ್ನು ಅನುಸರಿಸಿ ವಿಪತ್ತಿನಿಂದ ರಕ್ಷಿಸಿಕೊಳ್ಳಲು ಕೈ ಜೋಡಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೈಗೊಳ್ಳಬೇಕಾದ ಕ್ರಮಗಳು:

ಗುಡುಗು-ಮಿಂಚು ಬರಲಿದೆ ಎಂದು ಗೊತ್ತಾದಾಗ ಬಯಲಿನಲ್ಲಿ ನಿಲ್ಲದೆ, ತಗ್ಗು ಪ್ರದೇಶಕ್ಕೆ ಹೋಗಿ ಕುಳಿತುಕೊಳ್ಳಬೇಕು. ತಗ್ಗುಪ್ರದೇಶ ಇಲ್ಲದೇ ಬಯಲಿನಲ್ಲಿ0ತೆ?? ಇರಬೇಕಾದರೆ ತಲೆಯನ್ನು ಮೊಣಕಾಲುಗಳ ನಡುವೆ ಹುದುಗಿಸಿಕೊಳ್ಳಬೇಕು. ಇದು ಮಿಂಚಿನಿಂದ ಮೆದುಳಿಗೂ, ಹೃದಯಕ್ಕೂ ಆಗುವ ಹಾನಿಯನ್ನು ತಪ್ಪಿಸುತ್ತದೆ.

ಮರಗಳಿದ್ದ ಪ್ರದೇಶದಲ್ಲಿ ಇದ್ದರೆ ಅಲ್ಲಿಂದ ಬೇಗನೆ ಹೊರಬರುವುದು ಒಳ್ಳೆಯದು. ಸಿಡಿಲು ಮೋಡದಿಂದ ಭೂಮಿಗೆ ಹರಿಯಲು ಮರದಂತಹ ಹಸಿ, ಒದ್ದೆ ವಸ್ತುವನ್ನೇ ಆರಿಸಿಕೊಳ್ಳುತ್ತದೆ. ಎತ್ತರದ ಗುಡ್ಡದ ಮೇಲಿದ್ದರೆ ತಗ್ಗಿಗೆ ಇಳಿರಿ, ಕುರಿಮಂದೆ ಅಥವಾ ಜಾನುವಾರುಗಳ ಮಧ್ಯ ನಿಂತಿದ್ದರೆ ಅವುಗಳ ಮಧ್ಯದಲ್ಲಿ ಬಗ್ಗಿ ಕುಳಿತುಕೊಳ್ಳಿ,

ಏಕೆಂದರೆ ಮಿಂಚು ಪ್ರಾಣಿಗಳಿಗಿಂತ ಎತ್ತರವಿರುವ ಮನುಷ್ಯನನ್ನೇ ಆರಿಸಿಕೊಳ್ಳುತ್ತದೆ.

ಕೆರೆಯಲ್ಲಿ ಈಜುವುದು, ಸ್ನಾನ ಮಾಡುವುದು ಬೇಡ, ನೀರಿನಲ್ಲಿದ್ದರೆ ತಕ್ಷಣ ಹೊರಬನ್ನಿ. ವಿದ್ಯುತ್ ಕಂಬ, ಎಲೆಕ್ಟ್ರಿಕಲ್ ಟವರ್, ಮೊಬೈಲ್ ಟವರ್ ಟ್ರಾನ್ಸ್‌ಫಾರ್ಮರ್ ಮುಂತಾದವುಗಳ ಹತ್ತಿರವೂ ಇರಬಾರದು. ಮಳೆ ಬರುವ ಸಮಯದಲ್ಲಿ ಮನೆಯ ಟೆರೇಸ್ ಅನ್ನು ಸ್ವಚ್ಛ ಮಾಡುವ ಸಾಹಸ ಮಾಡಬಾರದು. ಮನೆಯ ಕಿಟಕಿಯ ಬಳಿ ನಿಲ್ಲುವುದಕ್ಕಿಂತಲೂ ಮನೆಯ ಮಧ್ಯದಲ್ಲಿರುವುದು ಸುರಕ್ಷಿತ. ಗುಡುಗು-ಸಿಡಿಲಿನ ಸಂದರ್ಭದಲ್ಲಿ ಪೊ?ನ್‌ನಲ್ಲಿ ಮಾತನಾಡಬಾರದು, ಅದನ್ನು ಚಾರ್ಜ್ ಮಾಡುವ ಸಾಹಸವೂ ಬೇಡ. ಕಾರಿನಲ್ಲಿ ಪ್ರಯಾಣಿಸುತ್ತಿದ್ದರೆ ಗಾಜನ್ನು ಮುಚ್ಚಿಕೊಳ್ಳಿ, ಕಾರಿನ ಬಾಡಿಯನ್ನು ಸಾಧ್ಯವಾದಷ್ಟು ಸ್ಪರ್ಶಿಸದೇ ಮಧ್ಯದಲ್ಲಿ ಕುಳಿತುಕೊಳ್ಳುವುದು ಒಳ್ಳೆಯದು ಮತ್ತು ಕಂಪ್ಯೂಟರ್, ಲ್ಯಾಪ್‌ಟ್ಯಾಪ್‌ಗಳಿಂದ ದೂರವಿರಬೇಕು. ಮನೆಯ ಕಾಂಕ್ರೀಟ್ ಗೋಡೆಗಳನ್ನು ಸ್ಪರ್ಶಿಸದೇ ಕೋಣೆಯ ಮಧ್ಯದಲ್ಲಿದ್ದರೆ ಹೆಚ್ಚು ಸುರಕ್ಷಿತ ಇರುತ್ತದೆ.

ಜಿಲ್ಲೆಯ ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ಸಿಡಿಲು ಬಾಧಿತ ವ್ಯಕ್ತಿಗಳು ಆಗಮಿಸಿದಾಗ ತಕ್ಷಣ ಚಿಕಿತ್ಸೆ ಕ್ರಮಗಳನ್ನು ಕೈಗೊಳ್ಳುವ ಕುರಿತು ವೈದ್ಯಾಧಿಕಾರಿಗಳಿಗೆ ಮಾಹಿತಿ ನೀಡಲಾಗಿದ್ದು ಅಗತ್ಯ ಔಷಧಿಗಳನ್ನು ದಾಸ್ತಾನು ಇಟ್ಟಿಕೊಳ್ಳಲಾಗಿದೆ ಎಂದು ಡಿಎಚ್‌ಓ ಡಾ.ಎಸ್.ಎಸ್.ನೀಲಗುಂದ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.